Akashvani : Bangalore
National Bulletin In Kannada
29.03.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು:

- ನವದೆಹಲಿಯಲ್ಲಿಂದು ರಾಷ್ಟ್ರೀಯ ಪರಿಸರ ಸಮ್ಮೇಳನ ಉದ್ಘಾಟಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
- ನಾಳೆ ಆಕಾಶವಾಣಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು
- ಭೂಕಂಪ ಸಂತ್ರಸ್ತ ಮ್ಯಾನ್ಮಾರ್‌ಗೆ ಭಾರತದಿಂದ ಪರಿಹಾರ ಸಾಮಗ್ರಿ ರವಾನೆ
- ಐದು ರಾಜ್ಯಗಳಿಗೆ ಅಗ್ನಿಶಾಮಕ ಸೇವೆಗಳಿಗೆ ಕೇಂದ್ರ ಗೃಹ ಸಚಿವಾಲಯದಿಂದ ಒಂದು ಸಾವಿರದ ೬೦೪ ಕೋಟಿ ರೂಪಾಯಿ ಅನುಮೋದನೆ
- ಐಪಿಎಲ್; ಚೆನ್ನೈ ಸೂಪರ್ ಕಿಂಗ್ಸ್ ಮಣಿಸಿ, ಸಂಭ್ರಮಿಸಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ

************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯಲ್ಲಿಂದು ರಾಷ್ಟ್ರೀಯ ಪರಿಸರ ಸಮ್ಮೇಳನ - ೨೦೨೫ಅನ್ನು ಉದ್ಘಾಟಿಸಲಿದ್ದಾರೆ. ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಆಯೋಜಿಸಿರುವ ಎರಡು ದಿನಗಳ ಈ ಸಮಾವೇಶದಲ್ಲಿ ಪರಿಸರ ತಜ್ಞರು, ನೀತಿ ನಿರೂಪಕರು ಹಾಗೂ ಕಾರ್ಯಕರ್ತರನ್ನು ಒಟ್ಟುಗೂಡಿಸಿ, ನಿರ್ಣಾಯಕ ಪರಿಸರ ಸಮಸ್ಯೆಗಳನ್ನು ಚರ್ಚಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ. ಹವಾಮಾನ ಬದಲಾವಣೆ, ಮಾಲಿನ್ಯ ನಿಯಂತ್ರಣ, ಜೀವ ವೈವಿಧ್ಯ ಸಂರಕ್ಷಣೆ ಹಾಗೂ ಸುಸ್ಥಿರ ಅಭಿವೃದ್ಧಿ ಸೇರಿದಂತೆ ಪರಿಸರ ಎದುರಿಸುತ್ತಿರುವ ತುರ್ತು ಸವಾಲುಗಳನ್ನು ಪರಿಹರಿಸುವ ನಾಲ್ಕು ಪ್ರಮುಖ ತಾಂತ್ರಿಕ ಅಧಿವೇಶನಗಳು ಸಮ್ಮೇಳನದಲ್ಲಿ ನಡೆಯಲಿವೆ. ಈ ಅಧಿವೇಶನಗಳು ಭಾರತದಲ್ಲಿ ಹಾಗೂ ಜಾಗತಿಕವಾಗಿ ಪರಿಸರ ಸುಸ್ಥಿರತೆಯನ್ನು ಉತ್ತೇಜಿಸಲು ಅರ್ಥಪೂರ್ಣ ಸಂವಾದ ಹಾಗೂ ಸಹಯೋಗ ವೃದ್ಧಿಸುವ ಗುರಿ ಹೊಂದಿವೆ.

************

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ’ಮನ್ ಕಿ ಬಾತ್’ ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರವಾಗಲಿದೆ.

************

ನಿನ್ನೆಯ ಭೂಕಂಪದಿಂದ ಸಂತ್ರಸ್ತಗೊಂಡಿರುವ ಮ್ಯಾನ್ಮಾರ್‌ಗೆ ಭಾರತ ಸುಮಾರು ೧೫ ಟನ್‌ಗಳಷ್ಟು ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ ಎಂದು ಮೂಲಗಳು ತಿಳಿಸಿವೆ. ಭಾರತೀಯ ವಾಯುಪಡೆಯ ಸಿ-೧೩೦-ಜೆ ವಿಮಾನವು ಹಿಂಡನ್ ವಾಯುಪಡೆ ನಿಲ್ದಾಣದಿಂದ ಪರಿಹಾರ ಸಾಮಗ್ರಿಗಳನ್ನು ಹೊತ್ತು ಮ್ಯಾನ್ಮಾರ್‌ಗೆ ಸಾಗಿಸಿತು. ಪರಿಹಾರ ಸಾಮಗ್ರಿಗಳಲ್ಲಿ ಟೆಂಟ್‌ಗಳು, ಸ್ಲೀಪಿಂಗ್ ಬ್ಯಾಗ್‌ಗಳು, ಬ್ಲಾಂಕೆಟ್‌ಗಳು, ಸಿದ್ಧಪಡಿಸಿದ ಆಹಾರ ಹಾಗೂ ಜನರೇಟರ್‌ನಂತಹ ಅಗತ್ಯ ಸಾಮಗ್ರಿಗಳು ಒಳಗೊಂಡಿವೆ. ಹೆಚ್ಚುವರಿಯಾಗಿ ಭೂಕಂಪದಿಂದ ಬಾಧಿತಗೊಂಡವರಿಗೆ ನೆರವಾಗಲು ಪ್ಯಾರಾಸಿಟಮಲ್ ಮಾತ್ರೆಗಳು, ಆಂಟಿಬಯೋಟಿಕ್ಸ್, ಸಿರಂಜ್‌ಗಳು, ಕೈಗವಸು, ಬ್ಯಾಂಡೇಜ್‌ಗಳಂತಹ ವೈದ್ಯಕೀಯ ಸಾಮಗ್ರಿಗಳನ್ನು ರವಾನಿಸಲಾಗಿದೆ. ನಿನ್ನೆ ಮ್ಯಾನ್ಮಾರ್ ಹಾಗೂ ನೆರೆಯ ಥೈಲ್ಯಾಂಡ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪನಗಳಿಂದಾಗಿ ಕಟ್ಟಡಗಳು, ಸೇತುವೆಗಳು ಹಾಗೂ ಒಂದು ಮಠ ಹಾನಿಗೀಡಾಗಿದೆ. ಮ್ಯಾನ್ಮಾರ್‌ನಲ್ಲಿ ಕನಿಷ್ಠ ೧೪೪ ಮಂದಿ ಸಾವನ್ನಪ್ಪಿದ್ದು, ನಿರ್ಮಾಣ ಹಂತದಲ್ಲಿದ್ದ ಬಹುಮಹಡಿ ಕಟ್ಟಡ ಕುಸಿದು, ಥೈಲ್ಯಾಂಡ್ ರಾಜಧಾನಿ ಬ್ಯಾಂಕಾಕ್‌ನಲ್ಲಿ ಕನಿಷ್ಠ ೧೦ ಮಂದಿ ಮೃತಪಟ್ಟಿದ್ದಾರೆ. ನಿನ್ನೆ ಮ್ಯಾನ್ಮಾರ್ ಹಾಗೂ ಥೈಲ್ಯಾಂಡ್‌ನಲ್ಲಿ ಸಂಭವಿಸಿದ ಭೂಕಂಪದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಕಳವಳ ವ್ಯಕ್ತಪಡಿಸಿದ್ದರು. ಎರಡೂ ದೇಶಗಳ ನಾಗರಿಕರ ಸುರಕ್ಷತೆ ಹಾಗೂ ಯೋಗಕ್ಷೇಮಕ್ಕಾಗಿ ಪ್ರಾರ್ಥಿಸಿದ್ದರು. ಭಾರತವು ಸಾಧ್ಯವಿರುವ ಎಲ್ಲಾ ಸಹಾಯವನ್ನು ನೀಡಲು ಸಿದ್ಧವಿದೆ. ಮ್ಯಾನ್ಮಾರ್, ಥೈಲ್ಯಾಂಡ್ ಸರ್ಕಾರದೊಂದಿಗೆ ಸಂಪರ್ಕದಲ್ಲಿರಲು ವಿದೇಶಾಂಗ ಸಚಿವಾಲಯಕ್ಕೆ ಸೂಚನೆ ನೀಡಿದ್ದರು. ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಮಾಧ್ಯಮಗೋಷ್ಠಿಯಲ್ಲಿ ಭೂಕಂಪಗಳ ಬಗ್ಗೆ ಪ್ರತಿಕ್ರಿಯಿಸಿ, ಮ್ಯಾನ್ಮಾರ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ನೆರವು ಹಾಗೂ ಪರಿಹಾರ ಸಾಮಗ್ರಿಗಳ ವಿಷಯದಲ್ಲಿ ಅವಶ್ಯಕತೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಇಂತಹ ನೈಸರ್ಗಿಕ ವಿಕೋಪಗಳು ಸಂಭವಿಸಿದಾಗಲೆಲ್ಲಾ ಭಾರತವು ನೆರೆಹೊರೆ ದೇಶಗಳಿಗೆ ಸದಾ ಮೊದಲ ಪ್ರತಿಕ್ರಿಯೆ ನೀಡುತ್ತದೆ ಎಂದು ಅವರು ಹೇಳಿದರು.

ಈ ನಡುವೆ ವಿಶ್ವಸಂಸ್ಥೆಯ ಮಹಾ ಪ್ರಧಾನ ಕಾರ್ಯದರ್ಶಿ ಗುಟೆರೆಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್, "ಭೂಕಂಪದ ನಂತರದ  ಕಾರ್ಯಾಚರಣೆಗಳಿಗೆ ಬೆಂಬಲವಾಗಿ ಜೀವ ಉಳಿಸುವ ನಿಟ್ಟಿನಲ್ಲಿ ತುರ್ತು ಪರಿಹಾರ ಸಂಯೋಜಕ ಟಾಮ್ ಫ್ಲೆಚರ್ ಅವರು  ಯುಎನ್ ಕೇಂದ್ರ ತುರ್ತು ಪ್ರತಿಕ್ರಿಯೆ ನಿಧಿಯಿಂದ ೫ ಮಿಲಿಯನ್ ಡಾಲರ್ ಆರಂಭಿಕವಾಗಿ ನೀಡಲಾಗಿದೆ  ಎಂದು ಹೇಳಿದ್ದಾರೆ.

************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಉನ್ನತ ಮಟ್ಟದ ಸಮಿತಿಯು ಅಗ್ನಿಶಾಮಕ ಸೇವೆಗಳ ವಿಸ್ತರಣೆ ಹಾಗೂ ಆಧುನೀಕರಣ ಯೋಜನೆಯಡಿ ೫ ರಾಜ್ಯಗಳಿಗೆ ಒಂದು ಸಾವಿರದ ೬೦೪ ಕೋಟಿ ರೂಪಾಯಿಗಳ ಯೋಜನೆಗಳನ್ನು ಅನುಮೋದಿಸಿದೆ. ಬಿಹಾರ, ಗುಜರಾತ್, ಜಾರ್ಖಂಡ್, ಮಹಾರಾಷ್ಟ್ರ ಹಾಗೂ ಕೇರಳ ಇದರಲ್ಲಿ ಸೇರಿವೆ. ೨೦೨೩ರ ಅಕ್ಟೋಬರ್‌ನಲ್ಲಿ ಸಿಕ್ಕಿಂನಲ್ಲಿ ಸಂಭವಿಸಿದ ನೀರ್ಗಲ್ಲು ಸ್ಫೋಟ ಪ್ರವಾಹದಿಂದಾಗಿ ಉಂಟಾದ ಹಾನಿಯಿಂದ ಚೇತರಿಸಿಕೊಳ್ಳಲು ಹಾಗೂ ಪುನರ್ ನಿರ್ಮಾಣ ಅಗತ್ಯಗಳಿಗಾಗಿ ಆ ರಾಜ್ಯಕ್ಕೆ ೫೫೫ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಅನುದಾನವನ್ನು ಸಮಿತಿ ಅನುಮೋದಿಸಿದೆ.

************

ಹಿರಿಯ ಬಿಜೆಪಿ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ. ಎರಡು ದಿನಗಳ ತಮ್ಮ ಬಿಹಾರ ಭೇಟಿಯ ಸಂದರ್ಭದಲ್ಲಿ ಗೋಪಾಲ್‌ಗಂಜ್‌ನಲ್ಲಿ ಸಾರ್ವಜನಿಕ ಸಭೆ, ಪಾಟ್ನಾದಲ್ಲಿ ರಾಜ್ಯಮಟ್ಟದ ಸಹಕಾರಿ ಸಮಾವೇಶ ಸೇರಿದಂತೆ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಪಾಟ್ನಾ ತಲುಪಿದ ನಂತರ ಅಮಿತ್ ಶಾ ಇಂದು ಸಂಜೆ ಬಿಜೆಪಿ ನಾಯಕರೂ ಸೇರಿದಂತೆ ರಾಜ್ಯದ ಲೋಕಸಭೆ, ರಾಜ್ಯಸಭೆಯ ಸದಸ್ಯರು, ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರೊಂದಿಗೆ ಸಭೆ ನಡೆಸಲಿದ್ದಾರೆ.  ಬಿಜೆಪಿ ರಾಜ್ಯ ಕೋರ್ ಸಮಿತಿಯೊಂದಿಗೂ ಸಭೆ ನಡೆಸಲಿದ್ದಾರೆ. ನಾಳೆ ಪಾಟ್ನಾದಲ್ಲಿ ರಾಜ್ಯಮಟ್ಟದ ಸಹಕಾರಿ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ೮೦೦ ಕೋಟಿ ರೂಪಾಯಿಗೂ ಹೆಚ್ಚು ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಲೋಕಾರ್ಪಣೆಗೊಳಿಸಲಿದ್ದಾರೆ. ಸಹಕಾರಿ ಸಮುದಾಯದ ೭ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ಕೇಂದ್ರ ಸಚಿವರು ಗೋಪಾಲ್‌ಗಂಜ್‌ಗೆ ತೆರಳಲಿದ್ದು, ಅಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಲಿದ್ದಾರೆ.

************

ಜಾಗತಿಕ ಮಟ್ಟದಲ್ಲಿ ಭಾರತದ ಉಪಸ್ಥಿತಿ  ಅತ್ಯಂತ ಬಲಿಷ್ಟವಾಗಿದೆ ಎಂದು  ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ     ಹೇಳಿದ್ದಾರೆ. ಮಾಧ್ಯಮ ಸಂಸ್ಥೆಯೊಂದರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಅವರು, ಈ ಮೊದಲು ಆಡಳಿತ ನಡೆಸಿದ ಸರ್ಕಾರಗಳು ಸಮಾನ ಅಂತರದ ನೀತಿಯನ್ನು ಹೊಂದಿದ್ದವು.  ನಾವು  ಅಧಿಕಾರಕ್ಕೆ ಬಂದ ನಂತರ ಅದನ್ನು ಬದಲಾಯಿಸಿದ್ದೇವೆ.

ಈಗ ಇಡೀ ಜಗತ್ತಿನ ದೃಷ್ಟಿ ಭಾರತದ ಮೇಲಿದೆ, ವಿಶ್ವದ ಜನರು ಭಾರತದತ್ತ ಹೊಸ ಕುತೂಹಲ, ಆಶಯದಿಂದ ಎದುರು ನೋಡುತ್ತಿದ್ದಾರೆ ಎಂದರು. ಭಾರತ ಜಗತ್ತಿನಲ್ಲಿಯೇ ಅತಿ ಹೆಚ್ಚಿನ ಯುವ ಜನರನ್ನು ಹೊಂದಿದ್ದು, ಯುವಜನರು ತ್ವರಿತವಾಗಿ ಕೌಶಲ್ಯತೆ ಪಡೆಯುತ್ತಿದ್ದು, ಆವಿಷ್ಕಾರದ ಕಡೆಗೆ ಮುನ್ನುಗ್ಗುತ್ತಿದ್ದಾರೆ. ಇದೆಲ್ಲದರ ಕಾರಣ ಭಾರತ ವಿದೇಶಾಂಗ ನೀತಿಯ ಉದ್ದೇಶ ಭಾರತ ಮೊದಲು ಎನ್ನುವುದಾಗಿದೆ. ಕಳೆದ ಏಳೆಂಟು ವರ್ಷಗಳ ಹಿಂದೆ ಭಾರತ ಜಗತ್ತಿನ ೧೧ನೇ ಆರ್ಥಿಕತೆಯಾಗಿತ್ತು, ಈಗ ಅದು ೫ನೇ ಅತಿ ದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮಿದ್ದು ಕಳೆದ ೧೦ ವರ್ಷಗಳಲ್ಲಿ ಜಿಡಿಪಿ ದ್ವಿಗುಣಗೊಂಡಿದೆ ಎಂದು ಹೇಳಿದರು.

************

ಬಿಹಾರದ ಕೋಸಿ ಮೆಚಿ ಅಂತಾರಾಜ್ಯ ಸಂಪರ್ಕ ಯೋಜನೆಯನ್ನು ಪಿಎಂಕೆಎಸ್‌ವೈ - ಎಐಬಿಪಿ ಅಡಿಯಲ್ಲಿ ಹಾಗೂ ನಾಲ್ಕು ಪಥಗಳ ಪಾಟ್ನಾ ಸಸಾರಾಂ ಕಾರಿಡಾರ್ ಯೋಜನೆಯಡಿಯಲ್ಲಿ ಸೇರಿಸಲು ಅನುಮೋದನೆ ನೀಡಿದ ಸಂಪುಟ ನಿರ್ಧಾರಗಳನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಬಿಹಾರದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಈ ಯೋಜನೆ ದೊಡ್ಡ ಪ್ರದೇಶದಲ್ಲಿ ನೀರಾವರಿಗೆ ಅನುಕೂಲ ಒದಗಿಸಲಿದ್ದು, ರೈತರ ಆದಾಯವನ್ನು ಹೆಚ್ಚಿಸುತ್ತದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

************

ಉತ್ಪಾದನೆಗೆ ಸಂಬಂಧಿಸಿದ ಪ್ರೋತ್ಸಾಹಕ ಯೋಜನೆ- ಪಿಎಲ್ ಐ ಅಡಿ ಅರೆವಾಹಕವಲ್ಲದ ಎಲೆಕ್ಟ್ರಾನಿಕ್ಸ್ ಘಟಕಗಳಿಗೆ ೨೨ ಸಾವಿರದ ೯೧೯ ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ದೆಹಲಿಯಲ್ಲಿ ಹೇಳಿದ್ದಾರೆ. ನಿನ್ನೆ ಸಚಿವ ಸಂಪುಟ ಸಭೆ ಬಳಿಕ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ಹಂಚಿಕೊಂಡ ಅವರು, ಭಾರತವನ್ನು ಎಲೆಕ್ಟ್ರಾನಿಕ್ಸ್ ಉತ್ಪಾದನೆ ಮತ್ತು ಪೂರೈಕೆ ಸರಪಳಿಯಲ್ಲಿ ಆತ್ಮ ನಿರ್ಭರ ಮಾಡುವ ಉದ್ದೇಶದಿಂದ ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಯೋಜನೆಗೆ ಅನುಮತಿ ನೀಡಲಾಗಿದೆ. ಜೊತೆಗೆ ಎಲೆಕ್ಟ್ರಾನಿಕ್ ಬಿಡಿಭಾಗಗಳ ಉತ್ಪಾದನಾ ಯೋಜನೆಗೂ ಸಮ್ಮತಿ ನೀಡಲಾಗಿದೆ ಎಂದರು. ಈ ಯೋಜನೆಯಡಿ ೯೧ ಸಾವಿರಕ್ಕೂ ಹೆಚ್ಚು ನೇರ ಹಾಗೂ ಪರೋಕ್ಷ ಉದ್ಯೋಗಗಳ ಸೃಷ್ಟಿಗೆ ಸಹಕಾರಿಯಾಗಲಿದೆ, ಕಳೆದ ಹತ್ತು ವರ್ಷಗಳಲ್ಲಿ ಎಲೆಕ್ಟ್ರಾನಿಕ್ ಕ್ಷೇತ್ರ ಅಗಾಧ ಬೆಳವಣಿಗೆ ಕಂಡಿದೆ. ಎಲೆಕ್ಟ್ರಾನಿಕ್ ಉತ್ಪಾದನೆ ಶೇಕಡ ೧೭ರಷ್ಟು ವಾರ್ಷಿಕ ಬೆಳವಣಿಗೆ ದರದೊಂದಿಗೆ ಐದು ಪಟ್ಟು ಹೆಚ್ಚಾಗಿದೆ. ಎಲೆಕ್ಟ್ರಾನಿಕ್ ರಫ್ತು ಪ್ರಸಕ್ತ ವರ್ಷದಲ್ಲಿ ಶೇಕಡ ೨೦ರಷ್ಟು ಹೆಚ್ಚಾಗಿದೆ. ಕಳೆದ ಹತ್ತು ವರ್ಷದಲ್ಲಿ ೨೫ ಲಕ್ಷ ಉದ್ಯೋಗ ಸೃಷ್ಟಿಸಲಾಗಿದೆ ಎಂದು ತಿಳಿಸಿದರು.

೨೦೧೪-೧೫ರಲ್ಲಿ ಒಂದು ಲಕ್ಷ ೯೦ ಸಾವಿರ ಕೋಟಿಯಷ್ಟಿದ್ದ ಎಲೆಕ್ಟ್ರಾನಿಕ್ ಸರಕುಗಳ ದೇಶೀಯ ಉತ್ಪಾದನೆ ೨೦೨೩-೨೪ರಲ್ಲಿ ೯ ಲಕ್ಷ ೫೨ ಸಾವಿರ ಕೋಟಿಗೆ ಏರಿಕೆಯಾಗಿದೆ.

************

ನಿನ್ನೆ ನಡೆದ ಐಪಿಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಭರ್ಜರಿ ಜಯಗಳಿಸಿದೆ. ಚೆನ್ನೈನ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ಪಂದ್ಯಾವಳಿಯಲ್ಲಿ ಆರ್‌ಸಿಬಿ ಒಡ್ಡಿದ ೧೯೭ ರನ್‌ಗಳನ್ನು ಬೆನ್ನುಹತ್ತಿದ ಚೆನ್ನೈ ಸೂಪರ್ ಕಿಂಗ್ಸ್, ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೪೬ ರನ್‌ಗಳನ್ನು ಮಾತ್ರ ಕಲೆಹಾಕಿತು. ಆರ್‌ಸಿಬಿಯ ರಜತ್ ಪಟಿದಾರ್ ೩೨ ಬಾಲ್‌ಗಳಿಗೆ ೫೧ ರನ್‌ಗಳನ್ನು ಗಳಿಸುವ ಮೂಲಕ ಪಂದ್ಯದ ನಿರ್ಣಾಯಕ ಆಟಗಾರಾದರು. ಇನ್ನೂ ಸಿಎಸ್‌ಕೆ ಆಟಗಾರ ರಚಿನ್ ರವೀಂದ್ರ ೪೧ ರನ್‌ಗಳನ್ನು ಗಳಿಸುವ ಮೂಲಕ ತಂಡದಲ್ಲಿ ಹೆಚ್ಚಿನ ರನ್‌ಗಳಿಸಿದ ಸಾಲಿನಲ್ಲಿ ಮೊದಲಿಗರಾದರು. ಇಂದು ಅಹಮದಬಾದ್‌ನಲ್ಲಿರುವ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಗುಜರಾತ್ ಟೈಟಾನ್ ಮತ್ತು ಮುಂಬೈ ಇಂಡಿಯನ್ಸ್ ತಂಡ ಸೆಣೆಸಲಿವೆ. ಪಂದ್ಯವು ಇಂದು ಸಂಜೆ ೭.೩೦ಕ್ಕೆ ನಡೆಯಲಿದೆ.

************